# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 634 |
| ಉತ್ತರಿಸಬೇಕಾದ ದಿನಾಂಕ | : | 04.03.2021. |
| ಸದಸ್ಯರ ಹೆಸರು | : | ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದಿಂದ ಯುವಕರಿಗೆ ಮತ್ತು ಕ್ರೀಡಾಪಟುಗಳಿಗೆ ಆರ್ಥಿಕ ನೆರವಿನ ಯೋಜನೆ ಇದೆಯೇ; ಇದ್ದಲ್ಲಿ ಅದರ ಸಂಪೂರ್ಣ ಮಾಹಿತಿ ನೀಡುವುದು; | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಸಾಧಕ ಕ್ರೀಡಾಪಟುಗಳು ಹಾಗೂ ಯುವಜನರಿಗಾಗಿ ಇರುವ ಆರ್ಥಿಕ ನೆರವಿನ ಯೋಜನೆಗಳ ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ. |
| ಆ) | ಕ್ರೀಡಾ ಪಟುಗಳು ತಮ್ಮ ಕ್ರೀಡೆಗೆ ಹೆಚ್ಚಿನ ತರಬೇತಿಗೆ ವಿದೇಶಕ್ಕೆ ಅಥವಾ ಹೊರ ರಾಜ್ಯಕ್ಕೆ ಹೋಗಲು ಸರ್ಕಾರ ಮತ್ತು ಇಲಾಖೆಯಿಂದ ಯಾವ ರೀತಿಯ ನೆರವು ನೀಡಲಾಗಿದೆ: | ಸಾಧಕ ಕ್ರೀಡಾ ಪಟುಗಳಿಗೆ ನಗದು ಪುರಸ್ಕಾರ, ಶೈಕ್ಷಣಿಕ ಶುಲ್ಕ ಮರು ಪಾವತಿ, ಕ್ರೀಡಾ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ವಿದೇಶ ಅಥವಾ ಹೊರ ರಾಜ್ಯಕ್ಕೆ ತರಬೇತಿಗೆ ತೆರಳಲು ಪ್ರತ್ಯೇಕವಾಗಿ ಯಾವುದೇ ಆರ್ಥಿಕ ನೆರವು ನೀಡಲಾಗುತ್ತಿಲ್ಲ. ಭಾರತ ಸರ್ಕಾರವು ಅತ್ಯಂತ ಪ್ರತಿಭಾನ್ವಿತ ಕ್ರೀಡಾ ಪಟುಗಳಿಗೆ ಆಯಾ ರಾಷ್ಟ್ರೀಯ ಕ್ರೀಡಾ ಫೆಡರೇಷನ್‌ಗಳ ಮೂಲಕ ರಾಷ್ಟ್ರೀಯ ತರಬೇತಿ ಶಿಬಿರಗಳನ್ನು ವಿವಿಧ ರಾಜ್ಯಗಳಲ್ಲಿ ಆಯೋಜಿಸುತ್ತಿದ್ದು, ವಿದೇಶದಲ್ಲಿ ತರಬೇತಿಗೂ ಸಹ ಅವಕಾಶ ಕಲ್ಪಿಸಿದೆ. |
| ಇ) | ಮಾರ್ಷಲ್ ಆರ್ಟ್ಸ್ ಕೂಡ ಕ್ರೀಡಾ ಇಲಾಖೆಗೆ ಸಂಬಂಧಪಟ್ಟಿದ್ದು, ಇದರ ಹೆಚ್ಚಿನ ತರಬೇತಿಗೆ ಬಹಳಷ್ಟು ಹಣ ಖರ್ಚಾಗುವ ಸಾಧ್ಯತೆ ಇದ್ದು ಇಂತಹ ಕ್ರೀಡಾ ಪಟುಗಳಿಗೆ ವಿಶೇಷ ಪ್ಯಾಕೇಜ್ ಇದೆಯೇ; | • ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಮಾರ್ಷಲ್ ಆರ್ಟ್ಸ್ ಕ್ರೀಡೆಗಳಾದ ಕುಸ್ತಿ, ಬಾಕ್ಸಿಂಗ್, ಜೂಡೋ, ಟೆಕ್ವಾಂಡೋ ಕ್ರೀಡೆಗಳಲ್ಲಿ ತರಬೇತಿಗೆ ಅಗತ್ಯ ಸೌಲಭ್ಯ ಹಾಗೂ ತರಬೇತುದಾರರ ಸೇವೆ ಕಲ್ಪಿಸಲಾಗುತ್ತಿದೆ. ಸದರಿ ಕ್ರೀಡೆಗಳ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಕರ್ನಾಟಕ ಕ್ರೀಡಾ ಪ್ರಾಧಿಕಾರದಿಂದ ಮಾನ್ಯತೆ ನೀಡಲಾಗಿದ್ದು, ತರಬೇತಿ ಶಿಬಿರ, ಕ್ರೀಡಾ ಕೂಟಗಳ ಸಂಘಟನೆ ಹಾಗೂ ರಾಷ್ಟ್ರಮಟ್ಟದ ಕ್ರೀಡೆಗಳಿಗೆ ಕರ್ನಾಟಕ ತಂಡಗಳ ನಿಯೋಜನೆಗೆ ಅನುದಾನ ನೀಡಲಾಗುತ್ತಿದೆ.<br>• ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳ ಕ್ರೀಡಾ ವಸತಿ ಶಾಲೆಗಳಲ್ಲಿ ಜೂಡೋ ಕ್ರೀಡಾ ವಿಭಾಗವನ್ನು ಆರಂಭಿಸಲಾಗಿದ್ದು, ಕ್ರೀಡಾಪಟುಗಳಿಗೆ ಉಚಿತ ವಸತಿ ಮತ್ತು ಊಟೋಪಹಾರ ಹಾಗೂ ತರಬೇತಿ ನೀಡಲಾಗುತ್ತಿದೆ. |

<table>
<tr>
<td></td>
<td></td>
<td>
<ul>
<li>ಬೆಳಗಾವಿ, ದಾವಣಗೆರೆ, ಹಳಿಯಾಳ ಮತ್ತು ಬಾಗಲಕೋಟೆಗಳ ಕ್ರೀಡಾ ವಸತಿ ನಿಲಯಗಳ, ಕುಸ್ತಿ ಕ್ರೀಡಾ ವಿಭಾಗವನ್ನುಆರಂಭಿಸಲಾಗಿದ್ದು, ಕ್ರೀಡಾಪಟುಗಳಿಗೆ ಉಚಿತ ವಸತಿ ಮತ್ತು ಊಟೋಪಹಾರ ಹಾಗೂ ತರಬೇತಿ ನೀಡಲಾಗುತ್ತಿದೆ.</li>
<li>ಕುಸ್ತಿ, ಜೂಡೋ ಕ್ರೀಡೆಗಳು ಜನಪ್ರಿಯವಾಗಿರುವ ಜಿಲ್ಲೆಗಳ ಕ್ರೀಡಾಂಗಣಗಳಲ್ಲಿ ತರಬೇತಿಗಾಗಿ ಆಧುನಿಕ ಕುಸ್ತಿ ಮತ್ತು ಜೂಡೋಮ್ಯಾಟ್ ಸೌಲಭ್ಯ ಕಲ್ಪಿಸಲಾಗಿದೆ.</li>
</ul>
</td>
</tr>
<tr>
<td>ಈ)</td>
<td>ಈತನಕ ಕ್ರೀಡಾಪಟುಗಳಿಗೆ ಯಾವ ಯಾವ ರೀತಿಯಲ್ಲಿ ಯಾವ ಯಾವ ಕ್ರೀಡೆಗಳಿಗೆ ಎಷ್ಟು ಹಣ ಅಥವಾ ಅನುದಾನ ಇಲಾಖೆಯಿಂದ ನೀಡಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)</td>
<td>ಅಥ್ಲೆಟಿಕ್ಸ್, ಬ್ಯಾಡ್ಮಿಂಟನ್, ಬಾಸ್ಕೆಟ್‌ಬಾಲ್, ಸೈಕ್ಲಿಂಗ್, ಫೆನ್ಸಿಂಗ್, ಫುಟ್‌ಬಾಲ್, ಹ್ಯಾಂಡ್‌ಬಾಲ್, ಜಿಮ್ನಾಸ್ಟಿಕ್ಸ್, ಹಾಕಿ, ಜೂಡೋ, ಕಬಡ್ಡಿ, ಕಯಾಕಿಂಗ್ ಮತ್ತು ಕನೋಯಿಂಗ್, ಖೋ-ಖೋ, ಲಾನ್‌ಟೆನ್ನಿಸ್, ಶೂಟಿಂಗ್, ಟೇಬಲ್ ಟೆನ್ನಿಸ್, ವೇಯ್ಟ್‌ಲಿಫ್ಟಿಂಗ್, ಟೆನ್ನಿಸ್, ವಾಲಿಬಾಲ್, ಕುಸ್ತಿ, ಈಜು, ಶಟಲ್ ಬ್ಯಾಡ್ಮಿಂಟನ್ ಮತ್ತಿತರ ಕ್ರೀಡೆಗಳ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ/ಪ್ರೋತ್ಸಾಹಧನ ವಿತರಿಸಲಾಗುತ್ತಿದ್ದು, 2019-20 ನೇ ಸಾಲಿನಲ್ಲಿ ವಿತರಿಸಲಾದ ನಗದು ಪುರಸ್ಕಾರ/ಪ್ರೋತ್ಸಾಹ ಧನದ ವಿವರ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ಯೋಜನೆ</th><th>ಕ್ರೀಡಾ ಪಟುಗಳ ಸಂಖ್ಯೆ</th><th>ಮೊತ್ತ (ರೂ. ಲಕ್ಷಗಳಲ್ಲಿ)</th></tr>
<tr><td>1</td><td>ನಗದುಪುರಸ್ಕಾರ</td><td>886</td><td>851.00</td></tr>
<tr><td>2</td><td>ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ</td><td>428</td><td>727.30</td></tr>
<tr><td>3</td><td>ಪ್ರತಿಭಾವಂತ ಕ್ರೀಡಾಪಟುಗಳ ಶೈಕ್ಷಣಿಕ ಶುಲ್ಕ ಮರುಪಾವತಿ</td><td>298</td><td>135.75</td></tr>
<tr><td>4</td><td>ಕ್ರೀಡಾ ವಿದ್ಯಾರ್ಥಿ ವೇತನ</td><td>524</td><td>52.40</td></tr>
<tr><td></td><td>ಒಟ್ಟು</td><td>2136</td><td>1766.45</td></tr>
</table>
</td>
</tr>
</table>

**ವೈಎಸ್‌ಡಿ-ಇಬಿಬಿ/10/2021.**

**(ಡಾ|| ನಾರಾಯಣ ಗೌಡ)**
ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಸಚಿವರು.

## ಅನುಬಂಧ

### ಆರ್ಥಿಕ ನೆರವಿನ ಯೋಜನೆಗಳ ವಿವರ.

1. **ನಗದುಪುರಸ್ಕಾರ:** ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಾಣಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ:-

**(ರೂ.ಲಕ್ಷಗಳಲ್ಲಿ)**

| ಕ್ರ ಸಂ | ವಿವರ | ಚಿನ್ನ | ಬೆಳ್ಳಿ | ಕಂಚು |
|---|---|---|---|---|
| 1 | ಒಲಂಪಿಕ್ಸ್ | 500.00 | 300.00 | 200.00 |
| 2 | ಏಷಿಯನ್ ಗೇಮ್ಸ್ | 25.00 | 15.00 | 8.00 |
| 3 | ಕಾಮನ್‌ವೆಲ್ತ್ ಗೇಮ್ಸ್ | 25.00 | 15.00 | 8.00 |
| 4 | ವರ್ಲ್ಡ್ ಕಪ್ /ಚಾಂಪಿಯನ್ ಶಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು) | 5.00 | 3.00 | 2.00 |
| 5 | ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು) | 5.00 | 3.00 | 2.00 |
| 6 | ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ) | 2.00 | 1.00 | 0.50 |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.50 | 0.25 | 0.15 |
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.25 | 0.15 | 0.10 |

2. **ಶೈಕ್ಷಣಿಕ ಶುಲ್ಕ ಮರು ಪಾವತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರು ಪಾವತಿ ಮಾಡಲಾಗುತ್ತಿದೆ.
3. **ಕ್ರೀಡಾ ವಿದ್ಯಾರ್ಥಿ ವೇತನ:** ರಾಜ್ಯಮಟ್ಟದ ಪದಕ ವಿಜೇತರಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ರೂ.10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.
4. **ಏಕಲವ್ಯ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ ನೀಡಲಾಗುವುದು.
5. **ಜೀವಮಾನ ಸಾಧನೆ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ರಾಜ್ಯದ ತರಬೇತುದಾರರಿಗೆ ಅವರ ಜೀವಮಾನ ಸಾಧನೆಗೆ ಪ್ರಶಸ್ತಿ ನೀಡಲಾಗುವುದು.
6. **ಕ್ರೀಡಾ ಪೋಷಕ ಪ್ರಶಸ್ತಿ:** ಕ್ರೀಡೆಯ ಅಭಿವೃದ್ಧಿಗೆ ಗಣನೀಯ ಕೊಡುಗೆ ನೀಡಿದ ಖಾಸಗಿ ಸಂಘ-ಸಂಸ್ಥೆಗಳಿಗೆ ಉತ್ತೇಜನ ನೀಡಲು ಕ್ರೀಡಾಪೋಷಕ ಪ್ರಶಸ್ತಿ ನೀಡಲಾಗುತ್ತಿದೆ.
7. **ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ**: ಅಂತರ-ರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ಕ್ರಮವಾಗಿ ತಲಾ ರೂ. 5.00, 3.00 ಮತ್ತು 1.00 ಲಕ್ಷಗಳ ನಗದು ಪುರಸ್ಕಾರ ನೀಡಲಾಗುತ್ತಿದೆ.
8. **ಪರಿಶಿಷ್ಟ ಜಾತಿ/ ಪಂಗಡದ ಯುವ ಜನರಿಗೆ ಪ್ರೋತ್ಸಾಹಧನ**: ಪರಿಶಿಷ್ಟಜಾತಿ/ ಪಂಗಡದ ಅಭ್ಯರ್ಥಿಗಳು ರಾಜ್ಯ ಮಟ್ಟದ ಯುವಜನಮೇಳ/ಯುವಜನೋತ್ಸವ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಪದಕ ವಿಜೇತರಿಗೆ ಪ್ರೋತ್ಸಾಹಧನ ನೀಡಲಾಗುವುದು.
9. **ನಮ್ಮೂರ ಶಾಲೆಗೆ ನಮ್ಮ ಯುವಜನರು:** ಈ ಕಾರ್ಯಕ್ರಮದಡಿ ಕ್ರೀಡಾ ಕ್ಷೇತ್ರದಡಿ ಸಾಧನೆ ಮಾಡಿದ ಸರಕಾರಿ ಶಾಲೆಗಳು ಕ್ರೀಡಾಚಟುವಟಿಕೆಗಳ ಪ್ರೋತ್ಸಾಹಕ್ಕಾಗಿ ಕ್ರೀಡಾಸಾಮಗ್ರಿಗಳನ್ನು ಪೂರೈಸಿಕೊಳ್ಳಲು ಪ್ರೋತ್ಸಾಹಧನ ಮತ್ತು ದೈಹಿಕ ಶಿಕ್ಷಕರಿಗೆ ಗೌರವಧನ ನೀಡಲಾಗುವುದು.
10. **ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಅನುದಾನ:** ಕ್ರೀಡಾಕೂಟಗಳ ಆಯೋಜನೆ, ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯ ತಂಡದ ನಿಯೋಜನೆಗೆ ಅನುದಾನ ನೀಡಲಾಗುತ್ತಿದ್ದು, ರಾಜ್ಯ ಕ್ರೀಡಾಸಂಸ್ಥೆಗಳು ಕ್ರೀಡಾಪಟುಗಳಿಗೆ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಪ್ರಯಾಣಭತ್ಯೆ, ದಿನಭತ್ಯೆ ಹಾಗೂ ಕ್ರೀಡಾಕಿಟ್ ಬಾಬ್ತು ವೆಚ್ಚ ಭರಿಸಲು ಅವಕಾಶ ಕಲ್ಪಿಸಲಾಗುತ್ತಿದೆ.